# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **141 (1447)** |
| ಸದಸ್ಯರ ಹೆಸರು | : | ಶ್ರೀ ಚಿದಾನಂದ್ ಎಂ ಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 16.03.2026 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಕ್ಕಳಿಗೆ ಶಾಲೆಯಲ್ಲಿ ದೈಹಿಕ ಶಿಕ್ಷಣವನ್ನು ಯಾವಾಗ ಪ್ರಾರಂಭಿಸಲಾಯಿತು : ಇದರ ಮುಖ್ಯ ಉದ್ದೇಶವೇನು : | ಶಾಲೆಗಳಲ್ಲಿ ಮಕ್ಕಳಿಗೆ ದೈಹಿಕ ಶಿಕ್ಷಣವನ್ನು 1870ರ ಸಾಲಿನಿಂದ ಪ್ರಾರಂಭಿಸಲಾಗಿರುತ್ತದೆ.<br><br>ವಿದ್ಯಾರ್ಥಿಯ ಸರ್ವಾಂಗೀಣ ಅಭಿವೃದ್ಧಿಗಾಗಿ ದೈಹಿಕ ಶಿಕ್ಷಣದ ಅವಶ್ಯಕತೆ ಇದೆ. ವಿದ್ಯಾರ್ಥಿಯ ದೈಹಿಕ, ಮಾನಸಿಕ, ಸಾಮಾಜಿಕ ಮತ್ತು ಚಲನಾತ್ಮಕ ಬೆಳವಣಿಗೆಯು ದೈಹಿಕ ಶಿಕ್ಷಣದ ಉದ್ದೇಶವಾಗಿದೆ.<br><br>ದೈಹಿಕ ಶಿಕ್ಷಣದ ಚಟುವಟಿಕೆಗಳ ಗುಣಮಟ್ಟ ಕಾರ್ಯವಿಧಾನವನ್ನು ಪರಿಶೀಲಿಸಿ ಸಮಗ್ರವಾದ ಕ್ರೀಡಾ ನೀತಿಯನ್ನು ರೂಪಿಸುವ ಸಲುವಾಗಿ 2006ನೇ ಸಾಲಿನಲ್ಲಿ ಪ್ರೊ ಎನ್ ವೈದ್ಯನಾಥನ್, ನಿವೃತ್ತ ಪ್ರಾಧ್ಯಾಪಕರು, ದೈಹಿಕ ಶಿಕ್ಷಣ ಮಹಾ ವಿದ್ಯಾಲಯ ಇವರ ಅಧ್ಯಕ್ಷತೆಯಲ್ಲಿ ತಜ್ಞರ ಸಮಿತಿಯ ಶಿಫಾರಸ್ಸಿನ ಆಧಾರದ ಮೇಲೆ ದೈಹಿಕ ಮತ್ತು ಆರೋಗ್ಯ ಶಿಕ್ಷಣದ ಪಠ್ಯ ಕ್ರಮವನ್ನು 1 ರಿಂದ 5ನೇ ತರಗತಿ, 6 ಮತ್ತು 7ನೇ ತರಗತಿ ಹಾಗೂ 8 ರಿಂದ 10 ನೇ ತರಗತಿಯಲ್ಲಿ ಅಳವಡಿಸಿಕೊಳ್ಳುವಂತೆ ಸರ್ಕಾರದ ಆದೇಶ ಸಂಖ್ಯೆ: ಇಡಿ 209 ಎಸ್‌ಎಲ್‌ಬಿ 2006 ದಿನಾಂಕ:06-08-2007 ರಲ್ಲಿ ಸರ್ಕಾರದ ಅನುಮೋದನೆ ನೀಡಲಾಗಿದೆ. |
| ಆ) | ರಾಜ್ಯದಲ್ಲಿ ಮಂಜೂರಾಗಿರುವ ದೈಹಿಕ ಶಿಕ್ಷಕರ ಹುದ್ದೆಗ ಸಂಖ್ಯೆ ಎಷ್ಟು: ಕಾರ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಕರ ಸಂಖ್ಯೆ ಎಷ್ಟು: ಖಾಲಿಯಿರುವ ದೈಹಿಕ ಶಿಕ್ಷಕರ ಸಂಖ್ಯೆ ಎಷ್ಟು : | ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಮಂಜೂರಾಗಿರುವ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳ ವಿವರ:- |

| ವಿವರ | ಮಂಜೂರಾದ ಒಟ್ಟು ಹುದ್ದೆಗಳು | ಕಾರ್ಯ ನಿರತ | ಒಟ್ಟು ಖಾಲಿ ಹುದ್ದೆಗಳು |
|---|---|---|---|
| ಪ್ರಾಥಮಿಕ | 6771 | 3410 | 3361 |
| ಪ್ರೌಢ | 5223 | 3382 | 1841 |

---2

| | | |
|---|---|---|
| ಇ) | ಖಾಲಿಯಿರುವ ದೈಹಿಕ ಶಿಕ್ಷಕರ ಹುದ್ದೆ ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು : | 2024-25ನೇ ಸಾಲಿನಲ್ಲಿ ಆಯವ್ಯಯ ಘೋಷಣೆಯಲ್ಲಿ "ಕಲ್ಯಾಣ ಕರ್ನಾಟಕ ಭಾಗದಲ್ಲಿ ಪ್ರಾಥಮಿಕ/ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರ ಖಾಲಿ ಹುದ್ದೆಗಳು ಸೇರಿ 5267 ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಚಾಲನೆಯಲ್ಲಿದೆ ಶಾಲೆಗಳಲ್ಲಿ ಮಕ್ಕಳ ದಾಖಲಾತಿಗೆ ಅನುಗುಣವಾಗಿ ಶಿಕ್ಷಕರ ಹುದ್ದೆಗಳನ್ನು ತರ್ಕಬದ್ಧಗೊಳಿಸಿ ವರ್ಗಾವಣೆ ಮಾಡಲಾಗಿದೆ. ಜಿಲ್ಲಾವಾರು ಹುದ್ದೆಗಳನ್ನು ಗುರುತಿಸಿ ನೇಮಕ ಮಾಡಲು ಪ್ರಕ್ರಿಯೆ ಜಾರಿಯಲ್ಲಿದೆ.<br><br>ದೈಹಿಕ ಶಿಕ್ಷಣ ಶಿಕ್ಷಕರು ಸೇರಿದಂತೆ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. |
| ಈ) | ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ವಾರದಲ್ಲಿ ಎಷ್ಟು ಪಿರಿಯಡ್ ದೈಹಿಕ ಶಿಕ್ಷಣವನ್ನು ಬೋಧಿಸಲಾಗುತ್ತಿತ್ತು:<br>ಪ್ರಸ್ತುತ ಎಷ್ಟು ಪಿರಿಯಡ್ ಬೋಧಿಸಲಾಗುತ್ತಿದೆ: | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ವಾರದಲ್ಲಿ ಪ್ರತಿ ತರಗತಿಗೆ 4 ಪಿರಿಯೆಡ್‌ಗಳನ್ನು ದೈಹಿಕ ಶಿಕ್ಷಣಕ್ಕೆ ಇಡಲಾಗಿದೆ. |
| ಉ) | ದೈಹಿಕ ಶಿಕ್ಷಣದ ಪಿರಿಯಡ್ ನಲ್ಲಿ ಮೌಲ್ಯ ಶಿಕ್ಷಣ ಬೋಧಿಸಲಾಗುತ್ತಿದೆಯೇ ಅಥವಾ ಬೋಧಿಸಲು ಉದ್ದೇಶಿಸಲಾಗಿದೆಯೇ: | ಮೌಲ್ಯ ಶಿಕ್ಷಣವನ್ನು ಪ್ರತ್ಯೇಕ ಪಿರಿಯಡ್‌ನಲ್ಲಿ ಬೋಧಿಸಲಾಗುವುದು. |
| ಊ) | ದೈಹಿಕ ಶಿಕ್ಷಣ ಬೋಧಿಸದೇ ಇದ್ದಲ್ಲಿ ಮಕ್ಕಳ ಸರ್ವಾಂಗೀಣ ವಿಕಾಸಕ್ಕೆ ಮತ್ತು ಭವಿಷ್ಯದ ಕ್ರೀಡಾಪಟುಗಳ ಸೃಷ್ಟಿಯನ್ನು ಮೊಟಕುಗೊಳಿಸಿದಂತೆ ಆಗುವುದಲ್ಲವೇ : | ಉದ್ಭವಿಸುವುದಿಲ್ಲ. |

**ಸಂಖ್ಯೆ:ಇಪಿ 72 ಎಸ್‌ಇಎಸ್ 2026**

(ಎಸ್. ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು,
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.